ಅ) ಈ ರೇಷ್ಮೆ ಗೂಡಿನ ಮಾರುಕಟ್ಟೆಯನ್ನು ಸ್ಥಗಿತಗೊಳಿಸಿದರೆ, ಹೆಚ್.ಡಿ. ಕೋಟೆ, ಕೆ.ಆರ್. ನಗರ, ಪಿರಿಯಾ ಪಟ್ಟಣ ಹಾಗೂ ಹುಣಸೂರು ಈ ನಾಲ್ಕು ತಾಲ್ಲೂಕುಗಳ ರೈತರುಗಳು ರೇಷ್ಮೆಗೂಡನ್ನು ಮಾರಾಟ ಮಾಡಲು ನೂರಾರು ಕಿ.ಮೀ. ದೂರದ ರಾಮನಗರ, ಕೊಳ್ಳೇಗಾಲಕ್ಕೆ ಹೋಗಬೇಕಾದ ಪರಿಸ್ಥಿತಿ ಉಂಟಾಗಿ, ರೈತರಿಗೆ ತೊಂದರೆಯಾಗುವುದಿಲ್ಲವೇ?

ಇ) ಈಗಿರುವ ಮಾರುಕಟ್ಟೆಯನ್ನೇ ಅಭಿವೃದ್ಧಿಪಡಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು?

ಶ್ರೀ ಹೆಚ್. ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಸುಸಜ್ಜಿತ ಮಾರುಕಟ್ಟೆ ಇದ್ದು ಅಭಿವೃದ್ಧಿ ಪಡಿಸಲಾಗುತ್ತಿದೆ.

ಬಿಜಾಪುರದಲ್ಲಿ ಫುಡ್ ಪ್ರೊಸೆಸಿಂಗ್ ಪಾರ್ಕ್
(ಆಹಾರ ಸಂಸ್ಕರಣ ಘಟಕ) ಸ್ಥಾಪಿಸುವುದು

1330(1714) ಶ್ರೀ ಪಾಟೀಲ್ ಶಿವಾನಂದ ಸಿದ್ದರಾಮಗೌಡ (ತಿಕೋಟ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಿಜಾಪುರದಲ್ಲಿ ಫುಡ್ ಪ್ರೊಸೆಸಿಂಗ್ ಪಾರ್ಕ್ (ಆಹಾರ ಸಂಸ್ಕರಣ) ಸ್ಥಾಪಿಸಲಾಗಿದೆಯೇ?

ಆ) ಸ್ಥಾಪಿಸಿರದಿದ್ದಲ್ಲಿ ಬಿಜಾಪುರದಲ್ಲಿ ಫುಡ್ ಪ್ರೊಸೆಸಿಂಗ್ ಪಾರ್ಕ್‌ನ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದರೆ, ಈ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು? ಘಟಕವನ್ನು ಯಾವಾಗ ಸ್ಥಾಪಿಸಲಾಗುವುದು; ನಿರ್ದಿಷ್ಟವಾದ ಕಾಲಮಿತಿ ಹಾಕಿಕೊಳ್ಳಲಾಗಿದೆಯೇ? ಹಾಗಿದ್ದಲ್ಲಿ, ಕಾಲಮಿತಿ ತಿಳಿಸುವುದು?

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು):

ಅ) ಫುಡ್ ಪ್ರೊಸೆಸಿಂಗ್ ಪಾರ್ಕ್ (ಆಹಾರ ಸಂಸ್ಕರಣ ಉದ್ಯಾನ)ವನ್ನು ಬಾಗಲಕೋಟೆಯಲ್ಲಿ ಸ್ಥಾಪಿಸಲಾಗುತ್ತಿದೆ (ಈ ಹಿಂದೆ ಬಾಗಲಕೊಟೆ ಬಿಜಾಪುರ ಜಿಲ್ಲೆಯಲ್ಲಿತ್ತು).

ಆ) ಕೇಂದ್ರಸರ್ಕಾರದ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರವು ಬಾಗಲಕೋಟೆ ಜಿಲ್ಲೆಯಲ್ಲಿ ಫುಡ್ ಪ್ರೋಸೆಸಿಂಗ್ ಪಾರ್ಕ್‌ನ್ನು ಸ್ಥಾಪನೆ ಮಾಡುತ್ತಿದೆ. ಈ ಪಾರ್ಕಿನಿಂದ ಬಿಜಾಪುರ ಜಿಲ್ಲೆಯನ್ನೊಳಗೊಂಡಂತೆ ಸುತ್ತಮುತ್ತಲಿನ ಸ್ಥಳಗಳು ಜಿಲ್ಲೆಗಳ ಅವಶ್ಯಕತೆಗಳನ್ನು ಪೂರೈಸುವ ನಿರೀಕ್ಷೆ ಇದೆ.

ಇ) -ಅನ್ವಯಿಸುವುದಿಲ್ಲ-

ಬೀದರ್ ಜಿಲ್ಲೆಯಲ್ಲಿ ರೇಷ್ಮೆ ಬೆಳೆ ಮಾರಾಟ

1331(1493) ಶ್ರೀ ಪ್ರಕಾಶ್ ಖಂಡ್ರೆ (ಬಾಲ್ಕಿ) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೀದರ್ ಜಿಲ್ಲೆಯಲ್ಲಿ ರೇಷ್ಮೆ ಮಾರಾಟ ಮಾಡಲು ಹುಮನಾಬಾದ್ ಮಾರ್ಕೆಟಿಂಗ್ ಯಾರ್ಡ್ ಪ್ರಾರಂಭಿಸಿದ್ದು, ಅಲ್ಲಿ ಪರ್‌ಚೇಸರ್ (ಖರೀದಿದಾರ) ಒಬ್ಬರೇ ಇರುವ ವಿಷಯ

ಸರ್ಕಾರದ ಗಮನಕ್ಕೆ ಬಂದಿದೆಯೇ? ಇನ್ನೊಬ್ಬ ಖರೀದಿದಾರನ ಸಲುವಾಗಿ ಸರ್ಕಾರಕ್ಕೆ ಬೇಡಿಕೆ ಬಂದಿದೆಯೇ? ಬಂದಿದ್ದರೆ ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು):

ಅ) ಬೀದರ್ ಜಿಲ್ಲೆ ಹುಮನಾಬಾದ್ ಪ್ರದೇಶದಲ್ಲಿ ಹಾಲಿ ಮೂರು ಜನ ರೀಲರುಗಳು ಗೂಡು ಖರೀದಿಗೆ ಅನುಜ್ಞಾ ಪತ್ರ ಹೊಂದಿದ್ದಾರೆ. ಖಾಸಗಿಯವರು ರೀಲಿಂಗ್ ಘಟಕ ಪ್ರಾರಂಭಿಸಲು ಮುಂದೆ ಬಂದಲ್ಲಿ ಅವರನ್ನು ಪ್ರೋತ್ಸಾಹಿಸಲಾಗುವುದು.

ಬಾಲ್ಕಿ ಕ್ಷೇತ್ರದ ರೇಷ್ಮೆ ಬೆಳೆಗಾರರಿಗೆ ಪರಿಹಾರ ನೀಡುವುದು

1332(1494) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ಬೀದರ್ ಜಿಲ್ಲೆ ಭಾಲ್ಕಿ ಮತ ಕ್ಷೇತ್ರದಲ್ಲಿ ರೇಷ್ಮೆ ಬೆಳೆಗಾರರ ಫುಡ್ ಹಾಗೂ ಇನ್ನಿತರ ವಸ್ತುಗಳು ಸುಟ್ಟಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದರೆ ಇದಕ್ಕೆ ಏನು ಪರಿಹಾರ ಒದಗಿಸಲಾಗುವುದು?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು):

1) ಶ್ರೀಮತಿ ಕಲಾವತಿ ಕೋಂ ಶಂಕರಪ್ಪ ಎಂ.ಎಂ. ವಾಡಿ ಇವರ ರೇಷ್ಮೆಹುಳು ಸಾಕಣೆ ಮನೆ ಹಾಗೂ ಸಲಕರಣೆಗಳು ಆಕಸ್ಮಿಕ ಬೆಂಕಿಗೆ ಆಹುತಿಯಾಗಿವೆ. ರೇಷ್ಮೆ ಇಲಾಖೆಯಲ್ಲಿ ಪ್ರಕೃತಿ ವಿಕೋಪಗಳಿಂದ ಆಗುವ ಧ್ವಂಸ ಅಥವಾ ನಷ್ಟದ ಪರಿಹಾರ ಕೊಡಲು ಅವಕಾಶ ಇರುವುದಿಲ್ಲ. ಈ ಬಗ್ಗೆ ಜಿಲ್ಲಾಧಿಕಾರಿಗಳನ್ನು ಸಂಪರ್ಕಿಸಲು ತಿಳಿಸಲಾಗಿದೆ.

ಭಾಲ್ಕಿ ಮತ ಕ್ಷೇತ್ರದಲ್ಲಿರುವ ಪಶು ಚಿಕಿತ್ಸಾ ಕೇಂದ್ರ

1333(1495) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) : ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಭಾಲ್ಕಿ ಮತ ಕ್ಷೇತ್ರದಲ್ಲಿರುವ ಒಟ್ಟು ಪಶು ಚಿಕಿತ್ಸಾ ಕೇಂದ್ರಗಳಲ್ಲಿರುವ ಸಿಬ್ಬಂದಿಯೆಷ್ಟು? (ವಿವರ ನೀಡುವುದು).

ಆ) ಹೊಸ ಚಿಕಿತ್ಸಾ ಕೇಂದ್ರಗಳನ್ನು ಪ್ರಾರಂಭಿಸಲು ಒಟ್ಟು ಎಷ್ಟು ಪ್ರಸ್ತಾವನೆಗಳು ಬಂದಿವೆ; ಇದರ ಬಗ್ಗೆ ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಂ. ಮಹದೇವ್ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ಭಾಲ್ಕಿ ಮತ ಕ್ಷೇತ್ರದಲ್ಲಿರುವ ಪಶು ಚಿಕಿತ್ಸಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ವಿವರ ಈ ಕೆಳಗಿನಂತಿವೆ:

ಹುದ್ದೆಯ ಹೆಸರು	ಮಂಜೂರಾದ ಹುದ್ದೆಗಳು	ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು	ಖಾಲಿ ಹುದ್ದೆಗಳು
1	2	3	4
1) ಸಹಾಯಕ ನಿರ್ದೇಶಕರು	01	-	01
2) ಪಶುವೈದ್ಯಾಧಿಕಾರಿ	07	05	02
3) ಪಶುವೈದ್ಯಕೀಯ ಮೇಲ್ವಿಚಾರಕರು	01	-	01